**ಪ್ರದಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.**

ಸಿ.ಸಿ.ನಂಃ 4512/2021 ಸಿ.ಡಬ್ಲ್ಯೂ –೦೪ ಪಿ.ಡಬ್ಲ್ಯೂ -01

| | | |
|---|---|---|
| ಹೆಸರು | ಃ | ಬಾಬುರಾವ |
| ತಂದೆಃ ಗಂಡ | ಃ | ಭೀಮರಾವ ಕ್ಷೀರಸಾಗರ |
| ವಯಸ್ಸು | ಃ | ೫೬ ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | ಃ | ಆಳಂದ |

ದಿನಾಂಕಃ ೩೧.೦೫.೨೦೨೪

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ ಃ**

ಆರೋಪಿತರ ಪರಿಚಯ ಇರುತ್ತದೆ. ಚಾಸಾ-1 ರಿಂದ 3, 5 ರವರ ಪರಿಚಯ ಇರುತ್ತದೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ಒಂದು ಪಂಚನಾಮೆಗೆ ಸಹಿ ಮಾಡು ಎಂದು ಹೇಳಿದಕ್ಕೆ ಪೋಲಿಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಸಾಕ್ಷಿಯು ಪಂಚನಾಮೆಯ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-೧ ಎಂದು ಸಹಿಯನ್ನು ನಿಪಿ-೧(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಭಾವಚಿತ್ರದಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಮಾನ್ಯ ಸಸಅ ಅವರಿಂದಃ**

ಈಗ ಓದಿ ಹೇಳಿದ ಹಾಗೆ ನನ್ನ ಸಮಕ್ಷಮ ಪೋಲಿಸರು ಪಂಚನಾಮೆ ಜರುಗಿಸಿರುತ್ತಾರೆ ಎಂದರೆ ಸರಿ ಅಲ್ಲ. ಪಂಚನಾಮೆ ಜರುಗಿಸಿ ಸಹಿಯನ್ನು ಪಡೆದುಕೊಂಡಿದ್ದರು ಪಂಚನಾಮೆ ಜರುಗಿಸಿಲ್ಲ ಎಂದು ಆರೊಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಥರೆ ಸರಿ ಅಲ್ಲ.

**ಪಾಟೀ ಸವಾಲು ಆರೋಪಿತರ ಪ**ರ ಶ್ರೀ ಬಿ.ಐ.ಎಸ್. **ವಕೀಲರಿಂದ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುವುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ